ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 9–12–2019

## ಪತ್ರಿಕಾ ಪ್ರಕಟಣೆ

# ವಿಜಯ ದಿವಸ ಕಾರ್ಯಕ್ರಮ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ)

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಡಿಸೆಂಬರ್ 16 ರ ಸೋಮವಾರದಂದು ಬೆಳಿಗ್ಗೆ 8.15 ಗಂಟೆಗೆ ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಸ್ಮಾರಕ, ಶ್ರೀಮತಿ ಇಂದಿರಾಗಾಂಧಿ ಸಂಗೀತ ಕಾರಂಜಿ ಉದ್ಯಾನವನ, ನೆಹರು ತಾರಾಲಯದ ಎದುರು, ಬೆಂಗಳೂರು ಇಲ್ಲಿ "ವಿಜಯ ದಿವಸ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಹಾಗೂ ಗೃಹ ಸಚಿವ ಶ್ರೀ ಬಸವರಾಜ ಬೊಮ್ಮಾಯಿ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

# ಸಚಿವರ ಪ್ರವಾಸ

ಬೆಂಗಳೂರು, ಡಿಸೆಂಬರ್ 09 (ಕರ್ನಾಟಕ ವಾರ್ತೆ)

ಕಂದಾಯ ಮತ್ತು ಪೌರಾಡಳಿತ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಮತ್ತು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಆದ ಆರ್. ಅಶೋಕ್ ಅವರು ಡಿಸೆಂಬರ್ 10 ರಂದು ಹುಬ್ಬಳ್ಳಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ.

## ಅಂಕಪಟ್ಟಿ ರವಾನೆ

ಬೆಂಗಳೂರು,  ಡಿಸೆಂಬರ್ 09 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ಮೇ–2019ರಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಅಂಕಪಟ್ಟಿಗಳನ್ನು ಈಗಾಗಲೇ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಕಳುಹಿಸಲಾಗಿದ್ದು, ಪರೀಕ್ಷೆಗೆ ಹಾಜರಿದ್ದ ಅಭ್ಯರ್ಥಿಗಳು ತಾವು ಪರೀಕ್ಷೆಗೆ ಹಾಜರಾಗಿದ್ದ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರದ ಮುಖ್ಯಸ್ಥರನ್ನು ಸಂಪರ್ಕಿಸಿ ಶಾಲಾ/ಕಚೇರಿಗಳ ಕೆಲಸದ ದಿವಸಗಳಲ್ಲಿ ಅಂಕಪಟ್ಟಿಗಳನ್ನು ಪಡೆಯಲು ನಿರ್ದೇಶಕರು (ಇತರೆ ಪರೀಕ್ಷೆಗಳು) ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Press Release

**Bengaluru, December 9 (Karnataka Information)**

**The Marks Cards of the Special Music, Dance and Talavadya Examination of MAY-2019 conducted by the Karnataka Secondary Education Examination Board, Bengaluru are already sent to concerned Examination Centers.**

**The Candidates are hereby informed to collect the Marks Cards from the Examination Centers during the school working days where they have attended the Exams says official press release.**